# **ಕರ್ನಾಟಕ ಸರ್ಕಾರ**

ಇ-ಕಛೇರಿ ಸಂ: ಇಡಿ 434 ಯುಬಿವಿ 2022

ಕರ್ನಾಟಕ ಸರ್ಕಾರ ಸಚಿವಾಲಯ,
ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ:20.09.2022

**ಇಂದ**
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ,
ಬೆಂಗಳೂರು

**ಇವರಿಗೆ**
ಕುಲಸಚಿವರು,
ಬೆಂಗಳೂರು ನಗರ ವಿಶ್ವವಿದ್ಯಾಲಯ,
ಸೆಂಟ್ರಲ್ ಕಾಲೇಜು ಆವರಣ,
ಡಾ||ಬಿ.ಆರ್. ಅಂಬೇಡ್ಕರ್ ವೀಧಿ
ಬೆಂಗಳೂರು-560001.

IASE R.V.Teacher's College Jayanagar Bangalore-11
NO. 21
DATE. 27/9/22

ಮಾನ್ಯರೇ,

ವಿಷಯ: ಬೆಂಗಳೂರು ನಗರ ವಿಶ್ವವಿದ್ಯಾಲಯದ ವ್ಯಾಪ್ತಿಯಲ್ಲಿ ಆರ್.ವಿ.ಟೀಚರ್ಸ್ ಕಾಲೇಜ್, ಜಯನಗರ, 2ನೇ ಬ್ಲಾಕ್, ನಿಯರ್ ಅಶೋಕ ಪಿಲ್ಲರ್, ಬೆಂಗಳೂರು-11 ಇಲ್ಲಿ ಅಸ್ತಿತ್ವದಲ್ಲಿರುವ ಬಿ.ಇಡಿ ಕೋರ್ಸಿಗೆ 2022-23ನೇ ಶೈಕ್ಷಣಿಕ ಸಾಲಿನಿಂದ ಶಾಶ್ವತ ಸಂಯೋಜನೆಯನ್ನು ನವೀಕರಿಸುವ ಬಗ್ಗೆ.

ಉಲ್ಲೇಖ:-
1. ಸರ್ಕಾರದ ಆದೇಶ ಸಂಖ್ಯೆ: ಇಡಿ 29 ಯುಎನ್ ಇ 2021 ದಿನಾಂಕ:12.02.2021
2. ತಮ್ಮ ಪತ್ರ ಸಂಖ್ಯೆ: ಬೆ.ನವಿ/ಕು.ಸ/ಸಂಯೋಜನಾ/680/2022-23. ದಿನಾಂಕ:02.07.2022.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ **ಆರ್.ವಿ.ಟೀಚರ್ಸ್ ಕಾಲೇಜ್**, ಜಯನಗರ, 2ನೇ ಬ್ಲಾಕ್, ನಿಯರ್ ಅಶೋಕ ಪಿಲ್ಲರ್, ಬೆಂಗಳೂರು-560011. ಇಲ್ಲಿ ಬಿ.ಇಡಿ ಕೋರ್ಸಿಗೆ 2022-23ನೇ ಶೈಕ್ಷಣಿಕ ಸಾಲಿನಿಂದ ಶಾಶ್ವತ ಸಂಯೋಜನೆಯನ್ನು ನವೀಕರಿಸಲು ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000 ರ ಪ್ರಕರಣ 59(11) ರಡಿ ಅಗತ್ಯವಾಗುವ ಸರ್ಕಾರದ ಶಿಫಾರಸ್ಸು ಕೋರಿ ಕಾಲೇಜಿನ ಅರ್ಜಿ, ಸ್ಥಳೀಯ ವಿಚಾರಣೆ ಸಮಿತಿಯ ವರದಿ ಹಾಗೂ ಸಿಂಡಿಕೇಟ್/ವಿದ್ಯಾವಿಷಯಕ ಪರಿಷತ್ತುಗಳ ಗೊತ್ತುವಳಿಗಳ ದಾಖಲೆಗಳೊಂದಿಗೆ UUCMS ಆನ್ ಲೈನ್ ತಂತ್ರಾಂಶದಲ್ಲಿ ಉಲ್ಲೇಖ(2) ಪತ್ರದನ್ವಯ ಸಲ್ಲಿಸಲಾಗಿರುವ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿದೆ..

ಸ್ಥಳೀಯ ವಿಚಾರಣೆ ಸಮಿತಿಯ ಅವಲೋಕನೆ ಮತ್ತು ತೀರ್ಮಾನಗಳನ್ನು ಪರಿಗಣಿಸಿದ ತರುವಾಯ ಬೆಂಗಳೂರು ವಿಶ್ವವಿದ್ಯಾಲಯದ ಶೈಕ್ಷಣಿಕ ಪರಿಷತ್ ಹಾಗೂ ಸಿಂಡಿಕೇಟ್ ಪ್ರಾಧಿಕಾರಗಳು ಅಂಗೀಕರಿಸಿದ ಗೊತ್ತುವಳಿಗಳನ್ನು ಅನುಸರಿಸಿ ಹಾಗೂ ಶೈಕ್ಷಣಿಕ/ಭೌತಿಕ ಹಾಗೂ ನಾಗರೀಕ ಮೂಲ ಸೌಕರ್ಯಗಳ ಲಭ್ಯತೆ ಹಾಗೂ ಗುಣಮಟ್ಟದ ಕಾರ್ಯನಿರ್ವಹಣೆಯ ಖಚಿತತೆಗಾಗಿ ಉಲ್ಲೇಖ (1) ರ ಸರ್ಕಾರದ ಆದೇಶದಲ್ಲಿ ನಿಗದಿಪಡಿಸಲಾದ ನಿಯತಾಂಕಗಳ

..2

To,
Shri Venkatesh
27/9/22

ಹಾಗೂ ಸೂಚ್ಯಾಂಕಗಳ ಪೂರೈಕೆಯನು ದೃಢಪಡಿಸಿಕೊಂಡು, ಪ್ರಸ್ತಾವನೆಯನ್ನು ಪರಿಗಣಿಸಲಾಗಿದೆ.

ಆದುದರಿಂದ, **ಆರ್.ವಿ.ಟೀಚರ್ಸ್ ಕಾಲೇಜ್**, ಜಯನಗರ, 2ನೇ ಬ್ಲಾಕ್, ನಿಯರ್ ಅಶೋಕ ಪಿಲ್ಲರ್, ಬೆಂಗಳೂರು-560011. ಇಲ್ಲಿ ಬಿ.ಇಡಿ ಕೋರ್ಸಿಗೆ 2022-23ನೇ ಶೈಕ್ಷಣಿಕ ಸಾಲಿನಿಂದ ಶಾಶ್ವತ ಸಂಯೋಜನೆ ನವೀಕರಿಸುವ ಕುರಿತು ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000 ರ ಪ್ರಕರಣ 59(11) ರಡಿ ಪ್ರದತ್ತವಾದ ಅಧಿಕಾರ ಚಲಾಯಿಸಿ ಶಿಫಾರಸ್ಸು ಮಾಡಲಾಗಿದೆ. ಎಂದು ತಿಳಿಸಲು ನಾನು ನಿರ್ದೇಶಿಸಲ್ಪಟ್ಟಿದ್ದೇನೆ.

| **ವ್ಯಾಸಂಗಕ್ರಮ** | **ವಿಷಯ ಸಮೂಹ** | **ವಿದ್ಯಾರ್ಥಿ ಪ್ರಮಾಣ** |
|---|---|---|
| ಬಿ.ಇಡಿ | ವಿವಿ ಪರಿನಿಯಮಾವಳಿಯಂತೆ | 100 |

**ಕಟ್ಟಡ ಸುರಕ್ಷತೆ/ಸಂರಚನೆ ಸ್ಥಿರತೆ ಪ್ರಮಾಣಪತ್ರವನ್ನು 6 ತಿಂಗಳುಗಳ ಒಳಗಾಗಿ ವಿಶ್ವವಿದ್ಯಾಲಯದಲ್ಲಿ ಹಾಜರುಪಡಿಸತಕ್ಕದ್ದು. ನ್ಯಾಕ್ ಮ್ಯಾನತೆಯನ್ನು ಮುಂದಿನ ಶೈಕ್ಷಣಿಕ ವರ್ಷದ ಒಳಗಾಗಿ ಕಡ್ಡಾಯವಾಗಿ ಪಡೆಯತಕ್ಕದ್ದು. NCTE ಯಿಂದ ಮಾನ್ಯತೆಯನ್ನು ಪಡೆಯತಕ್ಕದ್ದು. ತಪ್ಪಿದ್ದಲ್ಲಿ ಶಾಶ್ವತ ಸಂಯೋಜನೆಗೆ ಈ ಪತ್ರದಲ್ಲಿ ಶಿಫಾರಸ್ಸು ಸ್ವಯಂಚಾಲಿತವಾಗಿ ರದ್ದುಗೊಳ್ಳುತ್ತದೆ.**

**ಪೂರ್ಣಕಾಲಿಕ ದೈಹಿಕ ಶಿಕ್ಷಕರನ್ನು ನೇಮಕ ಮಾಡಿಕೊಳ್ಳುವುದು ಸೇರಿದಂತೆ ಸ್ಥಳೀಯ ವಿಚಾರಣೆ ಸಮಿತಿಯಿಂದ ಅವಲೋಕಿಸಲಾಗಿರುವ ನ್ಯೂನತೆಗಳನ್ನು ಒಂದು ವರ್ಷದೊಳಗಾಗಿ ಸರಿಪಡಿಸಿಕೊಳ್ಳತಕ್ಕದ್ದು. ತಪ್ಪಿದಲ್ಲಿ 2023-24ನೇ ಸಾಲಿನಿಂದ ಕಾಲೇಜಿನ ಶಾಶ್ವತ ಸಂಯೋಜನೆಯನ್ನು ರದ್ದುಪಡಿಸಲು ಬೆಂಗಳೂರು ನಗರ ವಿಶ್ವವಿದ್ಯಾಲಯಕ್ಕೆ ಸೂಚಿಸಲಾಗಿದೆ.**

ಮುಂದುರೆದು, **ಆರ್.ವಿ.ಟೀಚರ್ಸ್ ಕಾಲೇಜ್**, 2022-23ನೇ ಶೈಕ್ಷಣಿಕ ಸಾಲಿನಿಂದ ಮೇಲ್ಕಂಡಂತೆ ಅಸ್ತಿತ್ವದಲ್ಲಿರುವ ಕೋರ್ಸಿಗೆ ಸಂಯೋಜನೆ ನೀಡುವುದು ಸ್ಥಳೀಯ ವಿಚಾರಣೆ ಸಮಿತಿಯ ಷರತ್ತುಗಳು ಸೇರಿದಂತೆ ಈ ಕೆಳಕಂಡ ಎಲ್ಲಾ ಷರತ್ತುಗಳನ್ನು ಪಾಲಿಸುವ ನಿಬಂಧನೆಗೆ ಒಳಪಟ್ಟಿರುತ್ತದೆ.

1. ಕಾಲೇಜುಗಳಿಗೆ ಅನ್ವಯವಾಗುವ ಅನುದಾನ ಸಂಹಿತೆಯಲ್ಲಿ ಯಾವುದೇ ಉಪಬಂಧಗಳಿದ್ದರೂ ಕಾಲೇಜಿನ ಮೇಲ್ಕಂಡ ಕೋರ್ಸಿಗೆ ಸರ್ಕಾರವು ಯಾವುದೇ ಅನುದಾನವನ್ನು ಮಂಜೂರು ಮಾಡುವುದಿಲ್ಲ. ಅದನ್ನು ಶಾಶ್ವತ ಅನುದಾನರಹಿತ ಕೋರ್ಸೆಂದು ಪರಿಗಣಿಸತಕ್ಕದ್ದು;
2. ಮೇಲ್ಕಂಡ ಕಾಲೇಜು ವಿಶ್ವವಿದ್ಯಾಲಯದ ನಿಯಮಾವಳಿಗಳ ಉಪಬಂಧಗಳನ್ನು ತಪ್ಪದೇ ಪಾಲಿಸತಕ್ಕದ್ದು.

3. ನಿಗದಿತ ವಿದ್ಯಾರ್ಥಿ ಪ್ರಮಾಣಕ್ಕಿಂತ ಹೆಚ್ಚುವರಿಯಾಗಿ ವಿದ್ಯಾರ್ಥಿಗಳ ಪ್ರವೇಶ ಮಾಡತಕ್ಕದ್ದಲ್ಲ;
4. ಜಾರಿಯಲ್ಲಿರುವ ಸರ್ಕಾರದ ನಿಯಮಾವಳಿ, ಆದೇಶಗಳು ಹಾಗೂ ವಿಶ್ವವಿದ್ಯಾಲಯದ ಅನುಶಾಸನ, ಪರಿನಿಯಮಾವಳಿ ಇತ್ಯಾದಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು;
5. ಸ್ಥಳೀಯ ವಿಚಾರಣಾ ಸಮಿತಿ ವಿಧಿಸಿರುವ ಪ್ರತಿಯೊಂದು ಷರತ್ತನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು;
6. ಕಾಲೇಜು/ಆಡಳಿತ ಮಂಡಳಿಯು ಶೇ.50 ರಷ್ಟು ವಿಶ್ವವಿದ್ಯಾಲಯ ಕೋಟಾವನ್ನು (ಎಲ್ಲಿ ಅನ್ವಯವಾಗುತ್ತದೆಯೋ ಅಲ್ಲಿ) ವಿಶ್ವವಿದ್ಯಾಲಯದ ನಿಯಮಾವಳಿಯ ಪ್ರಕಾರ ನಿಗದಪಡಿತಕ್ಕದ್ದು; ಮತ್ತು ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿಗದಿಪಡಿಸಿದ ಶುಲ್ಕವನ್ನು ಮಾತ್ರ ವಸೂಲು ಮಾಡತಕ್ಕದ್ದು, ವಿಶ್ವವಿದ್ಯಾಲಯವು ನಿಗದಿಪಡಿಸಿದ ಶುಲ್ಕ/ ಮೊತ್ತಕ್ಕಿಂತ ಬೇರೆ ಹೆಚ್ಚಿನ ಮೊತ್ತವನ್ನು ವಸೂಲು ಮಾಡತಕ್ಕದ್ದಲ್ಲ.;
7. ದಿನಾಂಕ:13-8-1997 ರಂದು ವಿಶಾಖ v/s ರಾಜಸ್ತಾನ ಸರ್ಕಾರ ಮೊಕದ್ದಮೆಯಲ್ಲಿ ಸುಪ್ರೀಂ ಕೋರ್ಟು ನೀಡಿರುವ ತೀರ್ಪಿನನುಸಾರ ಯಾವುದೇ ವ್ಯಕ್ತಿ/ವಿದ್ಯಾರ್ಥಿಯು ಗಲಭೆಯನ್ನು ಉಂಟು ಮಾಡುವುದಾಗಲೀ ಅಥವಾ ಕಾಲೇಜಿನಲ್ಲಿ ಮಹಿಳೆಯರ ಮೇಲೆ ಲೈಂಗಿಕ ಕುರುಕುಳ ನೀಡಿದಲ್ಲಿ ಅದು ಸಂಜ್ಞೇಯ ಅಪರಾಧ(Cognizable Offence) ಎಂದು ಪರಿಗಣಿಸಿ, ಈ ತರಹದ ಚಟುವಟಿಕೆಗಳಲ್ಲಿ ತೊಡಗಿದ ವಿದ್ಯಾರ್ಥಿ/ ವ್ಯಕ್ತಿಯ ಪ್ರವೇಶವನ್ನು ರದ್ದುಪಡಿಸುವುದು' ಮತ್ತು ಆ ವ್ಯಕ್ತಿ/ವಿದ್ಯಾರ್ಥಿಯ ಮೇಲೆ ಕಾನೂನು ರೀತ್ಯಾ ಕ್ರಮ ಜರುಗಿಸತಕ್ಕದ್ದು; ಮುಂದುವರೆದು, ಕಾಲೇಜು/ಆಡಳಿತ ಮಂಡಳಿಯು ಸುಪ್ರೀಂ ಕೋರ್ಟಿನ ಆದೇಶದನ್ವಯ ಒಂದು ದೂರು ಸಮಿತಿಯನ್ನು ರಚಿಸಿ; ಇಂತಹ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ಜರುಗಿಸತಕ್ಕದ್ದು;
8. ಕಾಲೇಜು ವಿದ್ಯಾರ್ಥಿಗಳ ಬೆಳವಣಿಗೆಗಾಗಿ ಉತ್ತಮ ಕೋರ್ಸನ್ನು ನಡೆಸತಕ್ಕದ್ದು; ಕಾಲೇಜಿನ ಪ್ರಾಂಶುಪಾಲರು/ಆಡಳಿತ ಮಂಡಳಿಯು ವಿದ್ಯಾರ್ಥಿ/ಬೋಧಕ ವೃಂದವನ್ನು ಸೌಹಾರ್ದಯುತವಾಗಿ ಕಾಣತಕ್ಕದ್ದು;
9. ಕಾಲೇಜಿನ ಆಡಳಿತ ಮಂಡಳಿಯು ಯಾವುದೇ ವಿದ್ಯಾರ್ಥಿಯ ಅಂಕಪಟ್ಟಿ ಅಥವಾ ಇತರೆ ದಾಖಲಾತಿಗಳನ್ನು ಸದರಿ ವಿದ್ಯಾರ್ಥಿಯ ಪ್ರವೇಶವನ್ನು ವಿಶ್ವವಿದ್ಯಾಲಯವು ಅನುಮೋದಿಸುವವರೆಗೆ ಅಥವಾ 6 ತಿಂಗಳ ಅವಧಿಗೆ ಮೀರಿ ಇವುಗಳಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಅನಗತ್ಯವಾಗಿ ತಡೆಹಿಡಿಯತಕ್ಕದ್ದಲ್ಲ;
10. ಕಾಲೇಜಿನ ಆಡಳಿತ ಮಂಡಳಿಯು ಯಾವುದೇ ವಿದ್ಯಾರ್ಥಿಯು ವರ್ಗಾವಣೆ ಪ್ರಮಾಣಪತ್ರ ಬೇಕೆಂದು ಅಪೇಕ್ಷಿಸಿ ಅರ್ಜಿ ಸಲ್ಲಿಸಿದಲ್ಲಿ, ಅದನ್ನು ವಿತರಿಸುವಾಗ ವಿದ್ಯಾರ್ಥಿಗೆ ತೊಂದರೆ ನೀಡತಕ್ಕದ್ದಲ್ಲ; ಹಾಗೂ ಅವರಿಂದ ಬಾಕಿ ಉಳಿದಿರುವ ಶೈಕ್ಷಣಿಕ ವರ್ಷ/ಸೆಮಿಸ್ಟರ್ ಅವಧಿಗೆ ಮಾತ್ರ ಬೋಧಕ ಶುಲ್ಕವನ್ನು ಪಡೆಯತಕ್ಕದ್ದು ಹಾಗೂ ಬೇರೆ ಯಾವುದೇ ಮೊತ್ತವನ್ನು ಪಡೆಯತಕ್ಕದ್ದಲ್ಲ.
11. ಕ್ಯಾಪಿಟೇಷನ್ ಶುಲ್ಕವನ್ನು ಯಾವುದೇ ರೂಪದಲ್ಲೂ ಪಡೆಯತಕ್ಕದ್ದಲ್ಲ;
12. ಪ್ರವಾಶಾತಿಯಲ್ಲಿ ರೋಸ್ಟರ್ ಪದ್ಧತಿಯನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

ತಮ್ಮ ನಂಬುಗೆಯ,

(ಶೀತಲ್ ಎಂ.ಹಿರೇಮಠ)
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ)
ಉನ್ನತ ಶಿಕ್ಷಣ ಇಲಾಖೆ(ವಿಶ್ವವಿದ್ಯಾಲಯಗಳು-2)

ಪ್ರತಿ:-

1. ಕಾಲೇಜು ಶಿಕ್ಷಣ ಆಯುಕ್ತರು/ನಿರ್ದೇಶಕರು, ಬೆಂಗಳೂರು-560001

2. ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ,
3. ಪ್ರಾಂಶುಪಾಲರು, **ಆರ್.ವಿ.ಟೀಚರ್ಸ್ ಕಾಲೇಜ್**, ಜಯನಗರ, 2ನೇ ಬ್ಲಾಕ್, ನಿಯರ್ ಅಶೋಕ ಪಿಲ್ಲರ್, ಬೆಂಗಳೂರು-560011
4. ಇ-ಸಮನ್ವಯಾಧಿಕಾರಿ, ಉನ್ನತ ಶಿಕ್ಷಣ ಇಲಾಖೆ ಇವರಿಗೆ (ಉನ್ನತ ಶಿಕ್ಷಣ ಇಲಾಖೆಯ ಜಾಲತಾಣದಲ್ಲಿ ಪ್ರಕಟಿಸಲು)